ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 20-03-2021 ರಂದು ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ .ಪಿ . ವಾಯ್. ಎನ್ . ವಕೀಲರಿಂದಃ

ನಾನು ಈ ಪ್ರಕರಣದಲ್ಲಿ ವಾದಿ ಇರುತ್ತೇನೆ. ನನ್ನ ಸತ್ಯಪೂರ್ವಕ ಹೇಳಿಕೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರ ವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರ ವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ..

ನಾನು ಈ ಕೆಳಗಿನ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಅವುಗಳನ್ನು ಕೆಳಗಿನಂತೆ ಗುರುತಿಸಲಾಗಿರುತ್ತದೆ.

| | |
|---|---|
| ನಿಪಿಃ 1 | ಸಿ.ಎಸ್.ನಂ.1002 ಆಸ್ತಿಯ ಪ್ರಾಪರ್ಟಿ ರಿಜಿಸ್ಟರ್ ಕಾರ್ಡನ ದೃಢೀಕೃತ ಪ್ರತಿ ಮತ್ತು ನಕ್ಷೆ |
| ನಿಪಿಃ 2 | ದಿನಾಂಕಃ 03-07-2019 ರ ವಕೀಲರ ನೋಟಿಸಿನ ಕಚೇರಿ ಪ್ರತಿ |
| ನಿಪಿಃ 3 ರಿಂದ 6 | ಅಂಚೆ ರಶೀದಿಗಳು |
| ನಿಪಿಃ 7 ರಿಂದ 10 | ಅಂಚೆ ಸ್ವೀಕೃತಿಗಳು |
| ನಿಪಿಃ 11 | ಮರಣ ಪ್ರಮಾಣ ಪತ್ರದ ನೋಟ್ರಾಯಜ್ಡ ಪ್ರತಿ |

ನನ್ನ ದಾವೆಯನ್ನು ಮಾನ್ಯ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

ಪ್ರತಿವಾದಿಗಳು ಗೈರು ಹಾಜರಿದ್ದು ತಮ್ಮ ಪ್ರತಿವಾದ ಪತ್ರ ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿ ಅದೆ.

ಜೆ.ಎಮ್.ಎಫ್.ಸಿ ರೋಣ